## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು, ಚಾಂತಾರು ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ ರವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರ ರವರ ಪತ್ರ ಸಂಖ್ಯೆ:D.O.No. Compt/UPLOK/MYS/8092/ 2011/ARE-6, ದಿನಾಂಕ: 11.01.2017
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಉಡುಪಿ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂಉ/ಕೌನ್ಸಿಲ್/ಸಿಆರ್/2017-18 ದಿನಾಂಕ: 20-05-2017
3. ಸರ್ಕಾರದ ಇದೇ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ನೀಡಿದ ತಿಳುವಳಿಕೆ ಪತ್ರ ದಿ:25.05.2017
4. ಆಪಾದಿತ ಸದಸ್ಯರು ಕಾರಣ ಕೇಳುವ ನೋಟಿಸ್ಸಿಗೆ ಸಲ್ಲಿಸಿದ ಸಮಜಾಯಿಷಿ ದಿನಾಂಕ: 07-06-2017

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ಶ್ರೀ ಸುರೇಶ್ ಮೊಯ್ಲಿ, ಸದಸ್ಯರು, ಚಾಂತಾರು ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆಯಡಿ ಕ್ರಮ ಕೈಗೊಳ್ಳಲು ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ದಿನಾಂಕ 11.01.2017 ರಂದು ಶಿಫಾರಸ್ಸು ಮಾಡಿರುತ್ತಾರೆ

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಶ್ರೀ ಮಹೇಶ್ ಮೊಯ್ಲಿ, ಹಿಂದಿನ ಅಧ್ಯಕ್ಷರು ಹಾಗೂ ಹಾಲಿ ಸದಸ್ಯರು ಚಾಂತಾರು ಗ್ರಾಮ ಪಂಚಾಯತಿ ರವರ ವಿರುದ್ಧ 43(ಎ) ರನ್ವಯ ಕ್ರಮಕೈಗೊಳ್ಳಲು ಮು.ಕಾ.ನಿ.ಅ, ಜಿ.ಪಂ, ಉಡುಪಿ ಜಿಲ್ಲೆ. ರವರು ದಿನಾಂಕ 20.05.2017 ರಂದು ವರದಿ ನೀಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ದಿನಾಂಕ 25-05-2017 ರಂದು ತಮ್ಮ ಸಮಜಾಯಿಷಿಯೊಂದಿಗೆ ವಿಚಾರಣೆಗೆ ಹಾಜರಾಗುವಂತೆ ತಿಳುವಳಿಕೆ ಪತ್ರ ನೀಡಲಾಗಿದೆ. ಅದರಂತೆ ಆಪಾದಿತ ಸದಸ್ಯರು ದಿನಾಂಕ: 07-06-2017 ರಂದು ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸಿರುತ್ತಾರೆ. ಮತ್ತು ಆರೋಪಗಳನ್ನು ಅಲ್ಲಗಳೆದಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀ ಸುರೇಶ್ ಮೊಯ್ಲಿ, ಸದಸ್ಯರು, ಚಾಂತಾರು ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರಿಗೆ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು ಸದರಿಯವರು ವಿಚಾರಣೆಗೆ ಹಾಜರಾಗಿ ಮೌಖಿಕ ಹೇಳಿಕೆ ನೀಡಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ, ರವರು ಸಲ್ಲಿಸಿರುವ ವರದಿಯಯನ್ನು ಪರಿಶೀಲಿಸಲಾಗಿದ್ದು ಹಾಗೂ ಶ್ರೀ ಸುರೇಶ್ ಮೊಯ್ಲಿ, ಸದಸ್ಯರು, ಚಾಂತಾರು ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ರವರ ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಸರ್ಕಾರವು ಪರಿಶೀಲಿಸಿದ್ದು, ಸಂಬಂಧಪಟ್ಟ ದಾಖಲೆಗಳನ್ನು ಹಾಗೂ ವಿವರಗಳನ್ನು ಪರಿಶೀಲಿಸಿ, ಸದಸ್ಯರಿಗೆ ನೀಡಿರುವ ಕಾರಣ ಕೇಳುವ ನೋಟೀಸಿಗೆ ನೀಡಿರುವ ಸಮಜಾಯಿಷಿ ಸಮಂಜಸವಾಗಿಲ್ಲದಿರುವುದರಿಂದ ಮತ್ತು ಅದನ್ನು ಒಪ್ಪಿಕೊಳ್ಳಲು ಸೂಕ್ತ ದಾಖಲೆಗಳನ್ನು ಹಾಜರುಪಡಿಸದೆ ಇರುವ ಹಿನ್ನೆಲೆಯಲ್ಲಿ ಅವರು ದುರ್ನಡತೆಯು ಸಾಬಿತಾಗಿರುತ್ತದೆ. ಆದ್ದರಿಂದ ಅವರನ್ನು ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/43/ಗ್ರಾಪಂಕಾ/2017**
**ಬೆಂಗಳೂರು, ದಿನಾಂಕ:-17-10-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಸುರೇಶ್ ಮೊಯ್ಲಿ, ಸದಸ್ಯರು, ಚಾಂತಾರು ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ ಇವರು ಈ ಹಿಂದೆ ಚಾಂತಾರು ಗ್ರಾಮ ಪಂಚಾಯತಿ ಅಧ್ಯಕ್ಷರಾಗಿದ್ದ ಸಮಯದಲ್ಲಿ ನಿಯಮ ಬಾಹಿರವಾಗಿ ಬಹುಮಹಡಿ ಕಟ್ಟಡಗಳಿಗೆ ಅನುಮತಿ ನೀಡಿ, ದುರ್ನಡತೆ ಎಸಗಿರುವುದರಿಂದ ಸದರಿಯವರನ್ನು ಚಾಂತಾರು ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನದಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ರನ್ವಯ ತಕ್ಷಣದಿಂದ ಜಾರಿಗೆ ಬರುವಂತೆ ತೆಗೆದು ಹಾಕಿ ಆದೇಶಿಸಿದೆ.

(ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ
ಮತ್ತು ಪಂ.ರಾಜ್ ಇಲಾಖೆ.ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಯನ್ನು:-**

1. ನಿಬಂಧಕರು, ಕರ್ನಾಟಕ ಲೋಕಾಯುಕ್ತರು, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ.
4. ಶ್ರೀ ಸುರೇಶ್ ಮೊಯ್ಲಿ, ಸದಸ್ಯರು, ಚಾಂತಾರು ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚಾಂತಾರು ಗ್ರಾಮ ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
7. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.